Akashvani : Bangalore
Regional Bulletin In Kannada
17.01.2025 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಮಂಗಳೂರು ಪ್ರಾದೇಶಿಕ ಕಚೇರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶಂಕುಸ್ಥಾಪನೆ
- ಬೆಂಗಳೂರಿನಲ್ಲಿ ಅಮೆರಿಕದ ದೂತಾವಾಸ ಕಚೇರಿ ಉದ್ಘಾಟನೆ
- ಚಿಕ್ಕಮಗಳೂರಿನ ದತ್ತಪೀಠ, ಬಾಬಾ ಬುಡನ್‌ಗಿರಿ ದರ್ಗಾ ಕುರಿತ ಗೊಂದಲ ನಿವಾರಣೆ ನಿಟ್ಟಿನಲ್ಲಿ ಗೃಹ ಸಚಿವರಿಂದ ಸಭೆ
- ಮಂಗಳೂರಿನ ಕಡಲ ಕಿನಾರೆಯಲ್ಲಿ ನಾಳೆಯಿಂದ ಎರಡು ದಿನಗಳ ಕಾಲ ಅಂತಾರಾಷ್ಟ್ರೀಯ ಗಾಳಿಪಟ ಉತ್ಸವ

<><*<><>*><>

ಮಂಗಳೂರಿನಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಪ್ರಾದೇಶಿಕ ಕಚೇರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ರಾಜೀವ್ ಗಾಂಧಿ ವಿಶ್ವವಿದ್ಯಾಲಯವು, ಏಷ್ಯಾದ ಅತ್ಯಂತ ದೊಡ್ಡ ಆರೋಗ್ಯ ವಿಶ್ವವಿದ್ಯಾಲಯವಾಗಿದೆ. ಮೂರೂವರೆ ಲಕ್ಷ ವೈದ್ಯ ವಿದ್ಯಾರ್ಥಿಗಳು ಇಲ್ಲಿ ಅಧ್ಯಯನ ಮಾಡುತ್ತಿದ್ದಾರೆ. ಉತ್ತಮ ವೈದ್ಯರನ್ನು ರೂಪಿಸುವುದರ ಜೊತೆಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವಲ್ಲಿ ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಕೊಡುಗೆ ಅಪಾರವಾಗಿದೆ ಎಂದು ಶ್ಲಾಘಿಸಿದರು. ಸರ್ಕಾರಿ ಆಸ್ಪತ್ರೆಗಳೂ ಖಾಸಗಿ ಆಸ್ಪತ್ರೆಗಳ ಮಾದರಿಯಲ್ಲಿ ಶುಚಿತ್ವ ಮತ್ತು ನಿರ್ವಹಣೆ ಜೊತೆಗೆ ಇಲ್ಲಿ ಗುಣಮಟ್ಟದ ಚಿಕಿತ್ಸಾ ಸೌಲಭ್ಯ ಸಿಗುವಂತಾಗಬೇಕು. ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜು ಇರಬೇಕು ಎನ್ನುವುದು ನಮ್ಮ ಗುರಿಯಾಗಿದೆ ಎಂದರು. ವೈದ್ಯ ವಿಜ್ಞಾನ ಪದವೀಧರರೂ ಯುವ ನಿಧಿಗೆ ಅರ್ಹತೆ ಗಳಿಸಿದ್ದಾರೆ. ವೈದ್ಯ ವಿದ್ಯಾರ್ಥಿಗಳು ಇತರೆ ಕ್ಷೇತ್ರಗಳಿಗೆ ವಲಸೆ ಹೋಗದೆ, ಆರೋಗ್ಯ ಕ್ಷೇತ್ರದಲ್ಲೇ ತಮ್ಮ ಸೇವೆ ಸಲ್ಲಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಧ್ವನಿ ಮುಖ್ಯಮಂತ್ರಿ ಸಿದ್ದರಾಮಯ್ಯ

<><*<><>*><>

ಅಮೆರಿಕಾದೊಂದಿಗೆ ಸಂಬಂಧಗಳನ್ನು ವಿಸ್ತರಿಸಿ ಮತ್ತಷ್ಟು ಗಾಢವಾಗುತ್ತಿರುವ ಹಿನ್ನೆಲೆ ಬೆಂಗಳೂರಿನಲ್ಲಿ ನೂತನ ಅಮೆರಿಕ ದೂತವಾಸ ಕಚೇರಿ ಅತ್ಯಂತ ಅಗತ್ಯವಾಗಿತ್ತು ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಅಮೆರಿಕಾದ ನೂತನ ದೂತವಾಸ ಕಚೇರಿ ಉದ್ಘಾಟಿಸಿದ ನಂತರ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆ, ಎಲೆಕ್ಟ್ರಿಕ್ ವಾಹನ, ಬಾಹ್ಯಕಾಶ ವಲಯ, ರಕ್ಷಣೆ, ಡ್ರೋನ್ ಹಾಗೂ ಜೈವಿಕ ತಂತ್ರಜ್ಞಾನದಂತಹ ಹಲವು ಕ್ಷೇತ್ರಗಳಲ್ಲಿ ಎರಡೂ ದೇಶಗಳು ಪರಸ್ಪರ ಸಹಕರಿಸುವ ಸಾಮರ್ಥ್ಯ ಹೊಂದಿದೆ ಎಂದರು.

ಅಮೆರಿಕದೊಂದಿಗಿನ ನಿಕಟ ಸಹಭಾಗಿತ್ವಕ್ಕೆ ವಿಶ್ವಾಸಾರ್ಹ ಸಪ್ಲೈ ಚೈನ್ ಸಾಮರ್ಥ್ಯ ಹೊಂದಿದ ಭಾರತ ಅಗತ್ಯವಾಗಿದೆ ಎಂದು ಸಚಿವರು ವಿಶ್ಲೇಷಿಸಿದರು. ರಕ್ಷಣೆ, ತಂತ್ರಜ್ಞಾನ ಹಾಗೂ ಎಚ್‌ಎಎಲ್‌ನಂತಹ

ಸಂಸ್ಥೆಗಳು ಬೆಂಗಳೂರಿನಲ್ಲಿದ್ದು, ದೂತವಾಸ ಕಚೇರಿಯಿಂದ ಭಾರತ ಮತ್ತು ಬೆಂಗಳೂರು ಪ್ರಯೋಜನ ಪಡೆಯಲಿದೆ ಎಂದು ಹೇಳಿದರು. ಬೆಂಗಳೂರಿನ ದೂತವಾಸ ಕಚೇರಿಯು ವ್ಯಾಪಾರ, ಶಿಕ್ಷಣ, ತಂತ್ರಜ್ಞಾನ ಸಂಸ್ಥೆಗಳು ಹಾಗೂ ಸಾಮಾನ್ಯ ಜನರಿಗೆ ಪ್ರಯೋಜನ ಕಲ್ಪಿಸಲಿದೆ. ನೂತನ ದೂತವಾಸವೂ ಶೀಘ್ರದಲ್ಲೇ ತನ್ನ ವೀಸಾ ಸೇವೆಗಳನ್ನು ಆರಂಭಿಸಲಿದೆ ಎಂದು ಸಚಿವ ಡಾ.ಎಸ್.ಜೈಶಂಕರ್ ವಿಶ್ವಾಸ ವ್ಯಕ್ತಪಡಿಸಿದರು.

ಧ್ವನಿ: ಡಾ.ಎಸ್.ಜೈಶಂಕರ್

**<><*<><>*><>**

ಭಾರತ ಸದ್ಯದಲ್ಲಿಯೇ ಅಮೆರಿಕಾದ ಲಾಸ್‌ಏಂಜಲೀಸ್‌ನಲ್ಲಿ ಭಾರತೀಯ ದೂತವಾಸವನ್ನು ಆರಂಭಿಸಲಿದೆ ಎಂದು ಇದೇ ವೇಳೆ ಸಚಿವ ಡಾ.ಜೈಶಂಕರ್ ಪ್ರಕಟಿಸಿದರು. ಕಾರ್ಯಕ್ರಮದಲ್ಲಿ ಭಾರತದಲ್ಲಿರುವ ಅಮೆರಿಕಾದ ರಾಯಭಾರಿ ಎರಿಕ್ ಗಾರ್ಸೆಟ್ಟಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ಎಂ.ಬಿ. ಪಾಟೀಲ್, ಸಂಸದ ತೇಜಸ್ವಿ ಸೂರ್ಯ ಉಪಸ್ಥಿತರಿದ್ದರು. ಮತ್ತೊಂದೆಡೆ, ಬೆಂಗಳೂರಿನಲ್ಲಿ ಅಮೆರಿಕಾದ ದೂತವಾಸ ಕಚೇರಿ ಆರಂಭ ಸಂಬಂಧ ಕೇಂದ್ರ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ದೆಹಲಿಯಲ್ಲಿ ನಿನ್ನೆ ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ಅವರನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದ್ದಾರೆ.

**<><*<><>*><>**

ಚಿಕ್ಕಮಗಳೂರು ದತ್ತಾತ್ರೇಯ ಪೀಠ, ಬಾಬಾ ಬುಡನ್‌ಗಿರಿ ದರ್ಗಾ ಸಂಬಂಧಿಸಿದಂತೆ ಸರ್ವೋಚ್ಛ ನ್ಯಾಯಾಲಯದಲ್ಲಿ ಸಲ್ಲಿಕೆಯಾಗಿರುವ ವಿಶೇಷ ರಜೆ ಅರ್ಜಿ - ಎಸ್‌ಎಲ್‌ಪಿ ಕುರಿತು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸಭೆ ನಡೆಸಿದ್ದಾರೆ. ಸಭೆಯಲ್ಲಿ ಚಿಕ್ಕಮಗಳೂರು ಜಿಲ್ಲೆಯ ಶಾಸಕರು, ಜನಪ್ರತಿನಿಧಿಗಳು ಹಾಗೂ ಧಾರ್ಮಿಕ ಮುಖಂಡರು ಭಾಗವಹಿಸಿ, ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸಮಾಲೋಚನೆ ನಡೆಸಿದರು. ಈ ವಿಚಾರದಲ್ಲಿ ಕಾನೂನಿನ ಸಲಹೆ ಪಡೆದು, ಸಮಸ್ಯೆಯ ಶಾಶ್ವತ ಪರಿಹಾರ ಕಂಡುಕೊಳ್ಳುವುದು ಸರ್ಕಾರದ ಆಶಯವಾಗಿದೆ ಎಂದು ಸಭೆಯಲ್ಲಿ ಸಚಿವ ಜಿ. ಪರಮೇಶ್ವರ್ ಹೇಳಿದರು. ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಂದ್ರದ್ರೋಣ ಪರ್ವತದಲ್ಲಿರುವ ದತ್ತಾತ್ರೇಯ ಪೀಠ, ಬಾಬಾ ಬುಡನ್‌ಗಿರಿ ದರ್ಗಾ, ರಾಜ್ಯದಲ್ಲಿ ಭಾವೈಕ್ಯತೆ ಸಾರುವ ಸ್ಥಳವಾಗಿದೆ. ಇಲ್ಲಿ ೧೯೭೫ರವರೆಗೆ ಒಂದು ರೀತಿಯ ಕಾರ್ಯಕ್ರಮಗಳು ನಡೆದರೆ, ನಂತರದ ದಿನಗಳಲ್ಲಿ ಅನೇಕ ಗೊಂದಲಗಳನ್ನು ಕಂಡಿದ್ದೇವೆ ಎಂದರು. ಗೊಂದಲವನ್ನು ಬಗೆಹರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವ ಸಂಪುಟ ಉಪ ಸಮಿತಿ ರಚಿಸಿದ್ದಾರೆ. ಈವರೆಗೆ ನಾಲ್ಕು ಸಭೆಗಳನ್ನು ನಡೆಸಿ, ಅನೇಕ ದಾಖಲೆಗಳನ್ನು ಪರಿಶೀಲಿಸಿ, ದಾವೆಗೆ ಬೇಕಾದ ಮಾಹಿತಿಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

**<><*<><>*><>**

ಅಬಕಾರಿ ಇಲಾಖೆಯಲ್ಲಿ ಸುಧಾರಣೆ ಹಾಗೂ ಪಾರದರ್ಶಕತೆ ತರುವ ಹಿನ್ನೆಲೆಯಲ್ಲಿ ಹಲವು ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪೂರ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಬಕಾರಿ ಇಲಾಖೆಯಲ್ಲಿನ ವರ್ಗಾವಣೆಗೆ ಹೊಸ ನಿಯಮಗಳನ್ನು ರೂಪಿಸಲಾಗಿದೆ. ಇಲಾಖೆಯ ವರ್ಗಾವಣೆ ನಿಯಮಗಳನ್ನು ಮಾರ್ಪಾಡು ಮಾಡುವ ಮೂಲಕ ಪಾರದರ್ಶಕ ಮತ್ತು ನಿಯಮಾಧಾರಿತ ವರ್ಗಾವಣೆ ಪದ್ಧತಿಯನ್ನು ಜಾರಿಗೊಳಿಸಲು ಸಾಧ್ಯವಾಗಲಿದೆ ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಕರ್ನಾಟಕ ನಾಗರಿಕ ಸೇವೆಗಳು-ಅಬಕಾರಿ ಇಲಾಖೆಯ ವರ್ಗಾವಣೆ ನಿಯಮಗಳು-೨೦೨೫ಕ್ಕೆ ಅನುಮೋದನೆ ನೀಡಲಾಗಿದೆ. ಈ ಕುರಿತು ಕರಡನ್ನು ಪ್ರಕಟಿಸಿ, ಆಕ್ಷೇಪಣೆ ಅಥವಾ ಸಲಹೆಗಳನ್ನು ಆಹ್ವಾನಿಸಲಾಗುವುದು. ಆಕ್ಷೇಪಣೆ ಅಥವಾ ಸಲಹೆಗಳನ್ನು ಪರಿಗಣಿಸಿದ ನಂತರ ಇದನ್ನು

ಅಂತಿಮಗೊಳಿಸಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಸಚಿವ ತಿಮ್ಮಾಪೂರ ತಿಳಿಸಿದ್ದಾರೆ.

<><*<><>*><>

ಬೆಳಗಾವಿಯಲ್ಲಿ ಇದೇ ೨೧ರಂದು 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ್ ಕಾಂಗ್ರೆಸ್ ಬೃಹತ್ ಸಮಾವೇಶ' ಜರಗಲಿದೆ ಎಂದು ಕಾಂಗ್ರೆಸ್ ಪಕ್ಷದ ರಾಜ್ಯ ಉಸ್ತುವರಿ ರಣದೀಪ ಸಿಂಗ್ ಸುರ್ಜೇವಾಲಾ ತಿಳಿಸಿದ್ದಾರೆ. ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಾವೇಶಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ, ಸಂಸದೆ ಪ್ರಿಯಾಂಕಾ ಗಾಂಧಿ ಸೇರಿದಂತೆ ರಾಷ್ಟ್ರೀಯ ನಾಯಕರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

<><*<><>*><>

ಮಂಗಳೂರಿನ ಕಡಲ ಕಿನಾರೆಯು ಅಂತಾರಾಷ್ಟ್ರೀಯ ಮಟ್ಟದ ಗಾಳಿಪಟ ಉತ್ಸವಕ್ಕೆ ಸಜ್ಜಾಗಿದೆ. ನಾಳೆ ಮತ್ತು ನಾಡಿದ್ದು, ಗಾಳಿಪಟ ಉತ್ಸವ ಆಯೋಜನೆಯಾಗಿದೆ. ಈ ಕುರಿತು ಮಾಹಿತಿ ನೀಡಿದ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್, ಕರಾವಳಿ ಉತ್ಸವದ ಅಂಗವಾಗಿ ಮಂಗಳೂರಿನ ತಣ್ಣೀರು ಬಾವಿ ಕಡಲ ತೀರದಲ್ಲಿ ಗಾಳಿಪಟ ಉತ್ಸವ ಆಯೋಜನೆಯಾಗಿದೆ. ಜಿಲ್ಲಾಡಳಿತದ ಸಹಕಾರದೊಂದಿಗೆ 'ಟೀಮ್ ಮಂಗಳೂರು' ಹವ್ಯಾಸಿ ಗಾಳಿಪಟ ತಂಡದ ನೇತೃತ್ವದಲ್ಲಿ ಉತ್ಸವ ನಡೆಯಲಿದೆ ಎಂದು ತಿಳಿಸಿದರು. ಗಾಳಿಪಟ ಉತ್ಸವವನ್ನು ನಾಳೆ ಸಂಜೆ ೫ ಗಂಟೆಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಉದ್ಘಾಟಿಸಲಿದ್ದಾರೆ. ಎರಡೂ ದಿನ ಮಧ್ಯಾಹ್ನ ೩ ರಿಂದ ರಾತ್ರಿ ೯ ರ ತನಕ ಗಾಳಿಪಟ ಉತ್ಸವ ನಡೆಯಲಿದೆ ಎಂದರು. ಇಂಗ್ಲೆಂಡ್, ಜರ್ಮನಿ, ನೆದರ್‌ಲ್ಯಾಂಡ್, ಕ್ರೊವೇನಿಯಾ, ಇಟಲಿ, ಇಷ್ಟೋನಿಯ, ಸ್ವೀಡನ್, ಇಂಡೋನೇಷಿಯಾ, ಪೋರ್ಚುಗಲ್ ಮುಂತಾದ ವಿದೇಶಿ ಗಾಳಿಪಟ ತಂಡಗಳು ಹಾಗೂ ಒಡಿಶಾ, ರಾಜಸ್ತಾನ, ಮಹಾರಾಷ್ಟ್ರ, ತೆಲಂಗಾಣ, ಕೇರಳ, ಗುಜರಾತ್ ಮುಂತಾದ ರಾಜ್ಯಗಳಿಂದ ಗಾಳಿಪಟ ತಂಡಗಳು ಆಗಮಿಸುತ್ತಿವೆ. 'ಒಂದೇ ಆಕಾಶ, ಒಂದೇ ಭೂಮಿ, ಒಂದೇ ಕುಟುಂಬ' ಎಂಬ ಧ್ಯೇಯ ವಾಕ್ಯದಡಿ ಈ ಗಾಳಿಪಟ ಉತ್ಸವ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

<><*<><>*><>

ಬೆಂಗಳೂರಿನ ಯಲಹಂಕದ ವಾಯುಸೇನಾ ನೆಲೆಯಲ್ಲಿ ಫೆಬ್ರುವರಿ ೧ ರಿಂದ ೧೪ ರವರೆಗೆ 'ಏರೋ ಇಂಡಿಯಾ-೨೦೨೫' ವೈಮಾನಿಕ ಪ್ರದರ್ಶನ ನಡೆಯಲಿದೆ. ಈ ಹಿನ್ನಲೆಯಲ್ಲಿ ಯಲಹಂಕ ವಾಯುಸೇನಾ ನೆಲೆಯಿಂದ ೧೦ ಕಿಲೋ ಮೀಟರ್ ಅಂತರದಲ್ಲಿ ನಿರ್ಮಾಣ ಹಂತದಲ್ಲಿರುವ ಬೃಹತ್ ಕಟ್ಟಡಗಳಲ್ಲಿ ಉಪಯೋಗಿಸುವ ಕ್ರೇನ್‌ಗಳ ಎತ್ತರವನ್ನು ಫೆಬ್ರುವರಿ ೧ ರಿಂದ ೧೪ ರವರೆಗೆ ತಗ್ಗಿಸಲು ಹಾಗೂ ಕ್ರೇನ್ ಚಟುವಟಿಕೆಯನ್ನು ಸ್ಥಗಿತಗೊಳಿಸುವಂತೆ ಬಿಬಿಎಂಪಿ ಉತ್ತರ ವಿಭಾಗದ ಜಂಟಿ ನಿರ್ದೇಶಕರು, ಬಹುಮಹಡಿ ಕಟ್ಟಡಗಳ ಸಂಸ್ಥೆಗಳು ಹಾಗೂ ಅಭಿವೃದ್ಧಿದಾರರಿಗೆ ಸೂಚಿಸಿದ್ದಾರೆ.

<><*<><>*><>

ಉತ್ತರ ಕನ್ನಡ ಜಿಲ್ಲೆಯ ಮುರುಡೇಶ್ವರ ದೇವಸ್ಥಾನದ ಮಹಾ ರಥೋತ್ಸವವು ಇದೇ ೧೯ ರಂದು ನಡೆಯಲಿದೆ. ಜಾತ್ರಾ ಮಹೋತ್ಸವದ ಹಿನ್ನಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತೆ ಕ್ರಮ ವಹಿಸಲಾಗಿದೆ. ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಇದೇ ೧೯ರ ಬೆಳಗ್ಗೆ ೬ ಗಂಟೆಯಿಂದ ೨೦ ರ ಬೆಳಗ್ಗೆ ೬ ಗಂಟೆಯವರೆಗೆ ಭಟ್ಕಳ ತಾಲೂಕಿನ ಮುರ್ಡೇಶ್ವರ ಠಾಣಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮದ್ಯದಂಗಡಿ ಬಂದ್ ಮಾಡುವಂತೆ ಹಾಗೂ ಮದ್ಯ ಸಾಗಾಟ

ಮತ್ತು ಮಾರಾಟವನ್ನು ನಿಷೇಧಿಸಿ, ಉತ್ತರ ಕನ್ನಡ  ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಆದೇಶ ಹೊರಡಿಸಿದ್ದಾರೆ.

<><*<><>*><>

ಮೈಸೂರು ಆಕಾಶವಾಣಿಯು ೯೦ ವರ್ಷ ಪೂರೈಸಿದ ಸಂದರ್ಭದಲ್ಲಿ ಇಂದು ಚಾಮರಾಜನಗರದಲ್ಲಿ ’ನಮ್ಮ ಜಾನಪದ’ ಎಂಬ ಒಂದು ದಿನದ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.  ಮಾತು, ಹಾಡು, ಕುಣಿತ- ಈ ಮೂರು ವರ್ಗೀಕರಣದಲ್ಲಿ ದಿನವಿಡೀ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.  ಜಾನಪದ ವಿದ್ವಾಂಸ ಡಾ.ಕೃಷ್ಣಮೂರ್ತಿ ಹನೂರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಮೈಸೂರು ಆಕಾಶವಾಣಿ ಉಪನಿರ್ದೇಶಕ ಎಸ್.ಎಸ್.ಉಮೇಶ್, ಸಹಾಯಕ ನಿರ್ದೇಶಕರಾದ ಅಬ್ದುಲ್ ರಶೀದ್, ಟಿ.ವಿ.ವಿದ್ಯಾಶಂಕರ್, ತಾಂತ್ರಿಕ ವಿಭಾಗದ ಮುಖ್ಯಸ್ಥ ಟಿ.ಆನಂದನ್ ಉಪಸ್ಥಿತರಿದ್ದರು.

<><*<><>*><>

ಕೃಷಿ ಇಲಾಖೆ ವತಿಯಿಂದ ಸಿರಿಧಾನ್ಯ ಮತ್ತು ಸಾವಯವ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕ ಕಲ್ಪಿಸುವ ಹಾಗೂ ಗ್ರಾಹಕರಲ್ಲಿ ಅರಿವು ಮೂಡಿಸಲು ಹಾಸನದ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಜಾಗೃತಿ ಜಾಥಾಗೆ ಶಾಸಕ ಸ್ವರೂಪ್ ಪ್ರಕಾಶ್ ಇಂದು ಚಾಲನೆ ನೀಡಿದರು. ಜಿಲ್ಲಾ ಕ್ರೀಡಾಂಗಣದಿಂದ ಹೇಮಾವತಿ ಪ್ರತಿಮೆವರೆಗೂ ನಡೆದ ಜಾಥಾದಲ್ಲಿ ವಿವಿಧ ಕಲಾ ತಂಡಗಳು ಹಾಗೂ ಎತ್ತಿನ ಬಂಡಿಗಳೊಂದಿಗೆ ರೈತರು ಭಾಗವಹಿಸಿದ್ದರು.

<><*<><>*><>

<><*<>ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ<>*><>